**2 ನೇ ಆಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬಳ್ಳಾರಿ**

**ಸತ್ರ ಮೊಕದ್ದಮೆ ಸಂಖ್ಯೆ:16/2026**

ಪಿ.ಡಬ್ಲುಃ **4** ಸಿಡಬ್ಲುಃ **2**

| | | |
|---|---|---|
| ಸಾಕ್ಷಿಯ ಹೆಸರು | : | ಶೆಕ್ಷಾವಲಿ |
| ತಂದೆಯ ಹೆಸರು | : | ಹುಸೇನ್ ಸಾಬ್ |
| ವಯಸ್ಸು | : | **56** ವರ್ಷ |
| ವೃತ್ತಿ | : | ಹೋಟೇಲ್ ಮಾಲಿಕ |
| ವಾಸಸ್ಥಳ | : | ಕಂಪ್ಲಿ |

**ಸತ್ಯ ಪ್ರತಿಜ್ಞೆ ಮಾಡಿದ ದಿನಾಂಕಃ 12.08.2026**

**ಮುಖ್ಯ ವಿಚಾರಣೆ ಮಾನ್ಯ ಸಾರ್ವಜನಿಕ ಅಭಿಯೋಜಕರಿಂದಃ-**

**1)** ಈಗ ಸುಮಾರು **4** ವರ್ಷದ ಹಿಂದೆ ಇಂದಿರಾ ನಗರದಲ್ಲಿರುವ ನಮ್ಮ ಅಂಗಡಿಯ ಮುಂಭಾಗದಲ್ಲಿ ಪೊಲೀಸರು ಬಂದು ನನ್ನ ಸಹಿಯನ್ನು ಪಡೆದುಕೊಂಡಿದ್ದರು. ನಾನು ಈಗ ನೋಡುತ್ತಿರುವ ನಿಪಿ-**2** ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಸಾಕ್ಷಿಯ ಸಹಿಯನ್ನು ನಿಪಿ-**2**(ಬಿ) ಎಂದು ಗುರುತಿಸಲಾಯಿತು. ನಿಪಿ-**2** ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ನಿಪಿ-**2** ರಂತೆ ಪಂಚನಾಮೆಯನ್ನು ಮಾಡಿಲ್ಲ. ನಂತರ ಒಂದು ದಿನ ನಾನು ಸಂತೆ ಮಾಡಲು ಹೊಸಪೇಟೆಗೆ ಹೋಗಿದ್ದ ಸಮಯದಲ್ಲಿ ಪೊಲೀಸರು ನನಗೆ ಫೋನ್ ಮಾಡಿದ್ದರು. ನನ್ನನು ಪೊಲೀಸರು ಬಸ್ ನಿಲ್ದಾಣದ ಬಳಿ ಕರೆಯಿಸಿ ನನ್ನ ಸಹಿಯನ್ನು ಪಡೆದುಕೊಂಡಿದ್ದರು. ನಾನು ಈಗ ನೋಡುತ್ತಿರುವ ನಿಪಿ-**3** ರಲ್ಲಿ ನನ್ನ ಸಹಿ ಇದೆ. ಸಾಕ್ಷಿಯ ಸಹಿಯನ್ನು ನಿಪಿ-**3**(ಬಿ) ಎಂದು ಗುರುತಿಸಲಾಯಿತು. ನಿಪಿ-**3** ರಲ್ಲಿ ಬರೆದ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ನಿಪಿ-**3** ರಂತೆ ನನ್ನ ಸಮಕ್ಷಮ ಪಂಚನಾಮೆಯನ್ನು ಮಾಡಿಲ್ಲ. ನಿಪಿ-**2** ಮತ್ತು **3** ರಲ್ಲಿ ಪೊಲೀಸರು ನನ್ನ ಸಹಿಗಳನ್ನು ಏಕೆ ಪಡೆದಿದ್ದರು ಎಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀಸವಾಲು ಮಾಡಲು ಸರ್ಕಾರಿ ಅಭಿಯೋಜಕರು ಅನುಮತಿ ಕೋರಿರುತ್ತಾರೆ. ಅವರ ವಾದವನ್ನು ಕೇಳಿ, ಸಾಕ್ಷಿಯ ಹೇಳಿಕೆಯನ್ನು ಹಾಗೂ ಮುಖ್ಯ ವಿಚಾರಣೆಯನ್ನು ಪರಿಶೀಲನೆ ಮಾಡಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಸರ್ಕಾರಿ ಅಭಿಯೋಜಕರಿಗೆ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು).

<u>ಪಾಟೀಸವಾಲು ಮಾನ್ಯ ಸಾರ್ವಜನಿಕ ಅಭಿಯೋಜಕರಿಂದ:</u>

2) ದಿನಾಂಕ **22.02.2020** ರಂದು ಮುಂಜಾನೆ **11.00** ಗಂಟೆಯಿಂದ **11.45** ರವರೆಗೆ ಪೊಲೀಸರು ನನ್ನನ್ನು ಮತ್ತು ಚಾಸಾ-**3** ರವರನ್ನು ಕಂಪ್ಲಿ ಪಟ್ಟಣದಲ್ಲಿರುವ ಇಂದಿರಾ ನಗರ, **5** ನೇ ವಾರ್ಡನಲ್ಲಿರುವ ಚಾಸಾ-**1** ರವರ ತಾಯಿ ಚಾಸಾ-**5** ರವರ ಮನೆಯಲ್ಲಿ ಪಂಚರೆಂದು ಕರೆದಿದ್ದರು ಎಂದರೆ ಸರಿಯಲ್ಲ. ಚಾಸಾ-**1** ರವರು ತೋರಿಸಿದ ಆರೋಪಿ ಅವಳಿಗೆ ಹಿಂಸೆ ನೀಡಿದ ಸ್ಥಳದಲ್ಲಿ ಪೊಲೀಸರು ನಮ್ಮ ಸಮಕ್ಷಮ ನನಗೆ ಈಗ ಓದಿ ಹೇಳಿದಂತೆ ನಿಪಿ-**2** ರಂತೆ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ಅದರ ಸಂಗತಿ ತಿಳಿದುಕೊಂಡು ನಾನು ಸಹಿ ಮಾಡಿದ್ದೆ ಎಂದರೆ ಸರಿಯಲ್ಲ.

**3)** ಅದೇ ದಿವಸ ಸಂಜೆ **04** ರಿಂದ **04.45** ರ ಸಮಯದಲ್ಲಿ ಪೊಲೀಸರು ನನ್ನನ್ನು ಮತ್ತು ಚಾಸಾ-**4** ಈತನನ್ನು ಹೊಸಪೇಟೆಯ ಅಜಾದ್ ನಗರದಲ್ಲಿರುವ ಆರೋಪಿಯ ಮನೆಯಲ್ಲಿ ಪಂಚರೆಂದು ಕರೆದಿದ್ದರು ಎಂದರೆ ಸರಿಯಲ್ಲ. ಅಲ್ಲಿ ಚಾಸಾ-**1** ತೋರಿಸಿದ ಕೃತ್ಯ ಸ್ಥಳದಲ್ಲಿ ಪೊಲೀಸರು ನಮ್ಮ ಸಮಕ್ಷಮ ನನಗೆ ಈಗ ಓದಿ ಹೇಳಿದಂತೆ ನಿಪಿ-**3** ರಂತೆ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ನಿಪಿ-**3** ರ ಸಂಗತಿ ತಿಳಿದುಕೊಂಡು ನಾನು ಸಹಿ ಮಾಡಿದ್ದೆ ಎಂದರೆ ಸರಿಯಲ್ಲ.

**4)** ನಿಪಿ-**2** ಮತ್ತು **3** ರಂತೆ ನನ್ನ ಸಮಕ್ಷಮ ಪಂಚನಾಮೆಯನ್ನು ಮಾಡಿದ್ದರೂ ಸಹ ಮತ್ತು ನನಗೆ ಪಂಚನಾಮೆಯ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

SC No.16/2026
PW- 4

<u>ಪಾಟೀಸವಾಲು ಆರೋಪಿ ಪರವಾಗಿ ಶ್ರೀ ಕೆ.ವಿ.ಕೆ ವಕೀಲರಿಂದಃ</u>
ಶ್ರೀ ಕೆ.ವಿ.ಕೆ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ. ಸರಿ ಇದೆ.

2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬಳ್ಳಾರಿ.